ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

# ಲಸಿಕೆ ವಿತರಣೆಗೆ 3 ಸಮಿತಿ: ಮೋದಿ ಸೂಚನೆ

## ರಾಜ್ಯ, ತಾಲೂಕು, ಜಿಲ್ಲಾ ಮಟ್ಟದಲ್ಲಿ ಸಮಿತಿಗಳ ರಚನೆಗೆ ಸೂಚನೆ । ಲಸಿಕೆ ವಿತರಣೆಯಲ್ಲಿ ಲೋಪಗಳು ಆಗದಂತೆ ತಾಕೀತು

## ಯಡಿಯೂರಪ್ಪ ಜತೆಗಿನ ಸಂವಾದದಲ್ಲಿ ಪ್ರಧಾನಿ ನಿರ್ದೇಶನ । ರಾಜ್ಯದ ಕೊರೋನಾ ನಿಯಂತ್ರಣ ಕ್ರಮಗಳಿಗೆ ಮೋದಿ ತೃಪ್ತಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 25/11/20

ಮಹಾಮಾರಿ ಕೊರೋನಾಗೆ ಲಸಿಕೆ ಸಂಶೋಧನೆ ಕಾರ್ಯ ನಡೆಯುತ್ತಿದ್ದು, ಲಸಿಕೆಯನ್ನು ಸಮರ್ಥವಾಗಿ ನಿರ್ವಹಣೆ ಮಾಡುವ ಸಂಬಂಧ ಸರ್ವಸನ್ನದ್ಧರಾಗಬೇಕು ಎಂದು ಕರೆ ಪ್ರಧಾನಿ ನರೇಂದ್ರ ಮೋದಿ ಅವರು, ಈ ಸಂಬಂಧ ರಾಜ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಮೂರು ಸಮಿತಿಗಳನ್ನು ರಚಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಚುನಾವಣಾ ವೇಳೆ ರಾಜಕೀಯ ಪಕ್ಷವನ್ನು ಬೂತ್ ಮಟ್ಟದಿಂದ ಬಲಗೊಳಿಸುವಂತೆ ಲಸಿಕೆ ವಿತರಣೆಯಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದೂ ಮೋದಿ ಅವರು ಸೂಚಿಸಿದ್ದಾರೆ. ಇದೇ ವೇಳೆ, ರಾಜ್ಯದಲ್ಲಿ ಕೊರೋನಾ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಪ್ರಧಾನಿ ತೃಪ್ತಿ ವ್ಯಕ್ತಪಡಿಸಿದ್ದಾರೆ. ಈ ನಡುವೆ, ಮೋದಿ ಸೂಚನೆ ಬೆನ್ನಲ್ಲೇ 3 ಲಸಿಕಾ ಸಮಿತಿ ರಚನೆಗೆ ರಾಜ್ಯ ಸರ್ಕಾರ ಸಮ್ಮತಿಸಿದ್ದು, ಸಮಿತಿ ರಚಿಸುವುದಾಗಿ ಹೇಳಿದೆ.

**ಸಿಎಂಗೆ ಹಲವು ಸೂಚನೆ:** ಕೋವಿಡ್-19ಗೆ ಲಸಿಕೆ ಲಭ್ಯವಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಲಸಿಕೆ ವಿತರಣೆ ಪೂರ್ವ ಸಿದ್ಧತೆ, ಕೋವಿಡ್ ಸ್ಥಿತಿಗತಿ ಕುರಿತು ಮೋದಿ ಅವರು ಮಂಗಳವಾರ ಮುಖ್ಯಮಂತ್ರಿಗಳ ಜತೆ ವಿಡಿಯೋ ಕಾನ್ಫರೆನ್ಸ್ ನಡೆಸಿದರು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಮತ್ತಿತರರು ಉಪಸ್ಥಿತರಿದ್ದರು.

ಈ ವೇಳೆ ಲಸಿಕೆ ಬಳಕೆಗೆ ಅಗತ್ಯ ಇರುವ ಸಿದ್ಧತೆಗಳನ್ನು ಕೈಗೊಳ್ಳಬೇಕು. ಲಸಿಕೆ ಲಭ್ಯವಾಗುತ್ತಿದ್ದಂತೆ ಆದ್ಯತೆ ಮೇರೆಗೆ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಬೇಕು. ಲಸಿಕೆ ಲಭ್ಯವಾಗುವವರೆಗೆ ಯಾವುದೇ ಕಾರಣಕ್ಕೂ ಕೊರೋನಾ ಸೋಂಕಿನ ಬಗ್ಗೆ ನಿರ್ಲಕ್ಷ್ಯತನ ತೋರಬಾರದು ಎಂದು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಮೂರು ಸಮಿತಿಗಳನ್ನು ರಚಿಸಬೇಕು. ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರಾಜ್ಯ ಮಟ್ಟದ ಸಮಿತಿ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿಗಳನ್ನು ರಚಿಸಿ ಲಸಿಕೆ ವಿತರಣೆಯ ನಿರ್ವಹಣೆಯನ್ನು ಮಾಡಬೇಕು. ಆರ್‌ಟಿಪಿಸಿಆರ್ ಪರೀಕ್ಷೆಯನ್ನು ಹೆಚ್ಚಿಸಬೇಕು ಮತ್ತು ಮನೆಯಲ್ಲಿ ಕ್ವಾರಂಟೈನ್‌ಗೊಳಗಾಗಿರುವ ಸೋಂಕಿತರ ಮೇಲೆ ಹೆಚ್ಚಿನ ನಿಗಾ ವಹಿಸಬೇಕು ಎಂದು ನಿರ್ದೇಶಿಸಿದರು.

ಕೊರೋನಾ ಸಾವಿನ ಪ್ರಮಾಣವನ್ನು ಮತ್ತಷ್ಟು ಕಡಿಮೆಗೊಳಿಸಲು ಗಮನ ನೀಡಬೇಕು. ಕೊರೋನಾ ಸೋಂಕಿನ ಪ್ರಮಾಣವನ್ನು ಶೇ.5ರಷ್ಟು ಮತ್ತು ಸಾವಿನ ಪ್ರಮಾಣವನ್ನು ಶೇ.1ರಷ್ಟು ಮಾಡಬೇಕು. ಲಸಿಕೆ ಸಂಶೋಧನೆ ಮಾಡುವಲ್ಲಿ ವಿಜ್ಞಾನಿಗಳು ಕೆಲಸ ಮಾಡುತ್ತಿದ್ದಾರೆ. ಲಸಿಕೆ ವಿತರಣೆಗೆ ನೀವು ಯಾವ ರೀತಿ ತಯಾರಿ ಮಾಡಿಕೊಂಡಿದ್ದೀರಿ ಎಂಬ ಮಾಹಿತಿಯನ್ನು ಲಿಖಿತ ರೂಪದಲ್ಲಿ ಕೇಂದ್ರಕ್ಕೆ ಕಳುಹಿಸಿಕೊಡಬೇಕೆಂದು ಸೂಚಿಸಿದರು.

**3 ಸಮಿತಿ ರಚನೆ- ಬೊಮ್ಮಾಯಿ:** ಸಭೆ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪ್ರಧಾನಿಗಳ ಸೂಚನೆಯಂತೆ ಮುಖ್ಯಮಂತ್ರಿಗಳ ನೇತೃತ್ವದ ಸಮಿತಿ ಸೇರಿದಂತೆ ಮೂರು ಸಮಿತಿಗಳ ರಚನೆಗೆ ಕ್ರಮ ಕೈಗೊಳ್ಳಲಾಗುವುದು. ಹೆಚ್ಚು ಕೋವಿಡ್ ಪ್ರಕರಣ ಮತ್ತು ಕಡಿಮೆ ಕೋವಿಡ್ ಪ್ರಕರಣಗಳಿರುವ ರಾಜ್ಯಗಳ ಜತೆ ಪ್ರಧಾನಿ ಸಭೆ ನಡೆಸಿ ಮಾಹಿತಿ ಪಡೆದರು. ನೀತಿ ಆಯೋಗದ ಸದಸ್ಯ ಡಾ.ವಿ.ಕೆ.ಪೌಲ್ ಲಸಿಕೆ ಬಗ್ಗೆ ಮಾಹಿತಿ ನೀಡಿದರು. ಅಲ್ಲದೆ, ಉಳಿದ ದೇಶಗಳ ಲಸಿಕೆ ತಯಾರಿ ಕುರಿತು ಮಾಹಿತಿ ಒದಗಿಸಿದರು ಎಂದರು.

### ಮೊದಲು 30 ಕೋಟಿ ಜನರಿಗೆ ಲಸಿಕೆ: ಬೊಮ್ಮಾಯಿ



ದೇಶದಲ್ಲಿ ಮೊದಲ ಹಂತದಲ್ಲಿ 30 ಕೋಟಿ ಜನರಿಗೆ ಲಸಿಕೆ ವಿತರಣೆ ಮಾಡುವ ಉದ್ದೇಶವಿದೆ ಎಂದು ಸಚಿವ ಬೊಮ್ಮಾಯಿ ಮಾಹಿತಿ ನೀಡಿದರು. ಈ ಪೈಕಿ 1 ಕೋಟಿ ಆರೋಗ್ಯ ಕಾರ್ಯಕರ್ತರಿಗೆ ಮತ್ತು 2 ಕೋಟಿ ಕೊರೋನಾ ವಾರಿಯರ್ಸ್‌ಗೆ ಲಸಿಕೆ ಹಾಕಲಾಗುವುದು. 50-60 ವರ್ಷ ವಯೋಮಿತಿಯ 26 ಕೋಟಿ ಜನರಿಗೆ ಲಸಿಕೆ ನೀಡುವ ಉದ್ದೇಶ ಇದೆ ಎಂದರು.